**ಕರ್ನಾಟಕ ಸರ್ಕಾರ**
**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ**
ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.

ಸಂಖ್ಯೆ:ಕಪಂರಾಆ/ಅಭಿವೃದ್ಧಿ/131/2024 ದಿನಾಂಕ:12.03.2024

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕಟ್ಟಡಗಳ ನಿರ್ಮಾಣಗಳಿಗೆ ಪೂರ್ಣಗೊಂಡ (Completion Certificate) ಹಾಗೂ ಸ್ವಾಧೀನ ಪ್ರಮಾಣ ಪತ್ರ (Occupancy Certificate) ವಿತರಣೆ ಮಾಡುವ ಬಗ್ಗೆ.

**ಉಲ್ಲೇಖ:**
1. ಘನ ಉಚ್ಚನ್ಯಾಯಾಲಯದ ಪ್ರಕರಣ ಸಂಖ್ಯೆ: WP No. 26194/2023 (GM-RES)
2. ಕರ್ನಾಟಕ ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪವಿಧಿಗಳು, 2015.

******

ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ನಿರ್ಮಿಸಲಾಗುವ ಕಟ್ಟಡಗಳಿಗೆ ಅಥವಾ ಅಸ್ತಿತ್ವದಲ್ಲಿನ ಕಟ್ಟಡಗಳ ಬದಲಾವಣೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 ರನ್ವಯ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ. ಇದನ್ನು ಉಲ್ಲಂಘಿಸುವ ಸಂಬಂಧ ಅಧಿನಿಯಮದ ಪ್ರಕರಣ 298 ರನ್ವಯ ಕ್ರಮವಹಿಸಲು ಸೂಚಿಸಲಾಗಿರುತ್ತದೆ.

ಕರ್ನಾಟಕ ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪವಿಧಿಗಳು, 2015 ರ 12 ನೇ ಉಪವಿಧಿಯಲ್ಲಿ ಪೂರ್ಣಗೊಂಡ ಪ್ರಮಾಣಪತ್ರ ಹಾಗೂ 13 ನೇ ಉಪವಿಧಿಯಲ್ಲಿ ಅಧಿಭೋಗದಾರಿಕೆ ಪ್ರಮಾಣ ಪತ್ರ ವಿತರಣೆಯ ಬಗ್ಗೆ ತಿಳಿಸಲಾಗಿದ್ದು, ಉಪವಿಧಿಗಳನ್ನು ಉಲ್ಲಂಘಿಸುವ ಸಂಬಂಧ 14 ರ ಉಪವಿಧಿಯಲ್ಲಿ ಕ್ರಮವಹಿಸುವ ಬಗ್ಗೆ ತಿಳಿಸಲಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 (5-ಎ) ರಲ್ಲಿ ಗ್ರಾಮ ಪಂಚಾಯತ್‌ಗಳು ಕಟ್ಟಡದ ಲೈಸೆನ್ಸ್ ನೀಡುವ ವಿಷಯದಲ್ಲಿ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 ರ ಉಪಬಂಧಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು, ಸದರಿ ಉಪಬಂಧಗಳ ಉಲ್ಲಂಘನೆಯು "ದುರ್ನಡತೆ" ಯೆಂದು ಅರ್ಥೈಸಿ ಸಂಬಂಧಪಟ್ಟ ಅಧಿಕಾರಿ ಅಥವಾ ಸಿಬ್ಬಂಧಿಯು ಶಿಸ್ತುಕ್ರಮಕ್ಕೆ ಹೊಣೆಗಾರರಾಗುವ ಬಗ್ಗೆ ತಿಳಿಸಲಾಗಿರುತ್ತದೆ.

ಆದ್ದರಂತೆ, ಮೇಲ್ಕಂಡ ಕಾಯ್ದೆಗಳು ಮತ್ತು ಉಪವಿಧಿಗಳ ಅನ್ವಯ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ನಿರ್ಮಿಸಲಾಗುವ ಕಟ್ಟಡಗಳಿಗೆ ಅಥವಾ ಅಸ್ತಿತ್ವದಲ್ಲಿನ ಕಟ್ಟಡಗಳ ಬದಲಾವಣೆಗಳಿಗೆ ಸಂಬಂಧಿಸಿದಂತೆ ಕಾಮಗಾರಿಯು ಪೂರ್ಣಗೊಂಡ ನಂತರ ಪ್ರಾಧಿಕಾರಕ್ಕೆ ಅರ್ಹನಾದ ವಾಸ್ತುಶಿಲ್ಪಿ /ಪಟ್ಟಿಯಲ್ಲಿನ (Empanel) ಇಂಜಿನಿಯರ್/ ಮೇಲ್ವಿಚಾರಕರಿಂದ ಪೂರ್ಣಗೊಂಡ ಪ್ರಮಾಣ ಪತ್ರವನ್ನು ಪಡೆದ ನಂತರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಅಧಿಭೋಗದಾರಿಕೆ ಪ್ರಮಾಣ ಪತ್ರ ವಿತರಣೆಗೆ ಪೂರ್ವದಲ್ಲಿ ವಿತರಣೆ ಮಾಡಲಾದ ಲೈಸೆನ್ಸ್, ಅನುಮೋದಿಸಲಾದ ಕಟ್ಟಡ ನಕ್ಷೆ ಹಾಗೂ ಅಂದಾಜು ಪಟ್ಟಿಗಳಂತೆ ಕಟ್ಟಡ ನಿರ್ಮಾಣವಾಗಿರುವ ಬಗ್ಗೆ ಸಂಬಂಧಿಸಿದ ಪ್ರಾಧಿಕಾರಗಳೊಂದಿಗೆ ಜಂಟಿಯಾಗಿ ಪರಿಶೀಲಿಸಿ, ಸದರಿ ನಿರ್ಮಾಣವು ಕರ್ನಾಟಕ ಪಂಚಾಯತ್ ರಾಜ್ (ಕಟ್ಟಡಗಳ ನಿರ್ಮಣದ ಮೇಲೆ ಜಿಲ್ಲಾ ಪಂಚಾಯತ್‌ಗಳ, ತಾಲ್ಲೂಕು ಪಂಚಾಯತ್‌ಗಳ ಮತ್ತು ಗ್ರಾಮ ಪಂಚಾಯತ್‌ಗಳ ನಿಯಂತ್ರಣ) ಮಾದರಿ ಉಪವಿಧಿಗಳು, 2015 ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 64 (5-ಎ) ರಲ್ಲಿನ ಷರತ್ತುಗಳನ್ವಯ ದೃಢೀಕರಿಸಿಕೊಂಡ ನಂತರವಷ್ಟೇ ಅಧಿಭೋಗದಾರಿಕೆ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ಪೂರ್ಣ ವಿವರಗಳೊಂದಿಗೆ ಸಂಬಂಧಿಸಿದ ಅಧಿಭೋಗದಾರಿನಿಗೆ ವಿತರಿಸಲು ಕ್ರಮವಹಿಸತಕ್ಕದ್ದು,

ಮೇಲ್ಕಂಡ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿಗಳು ಅಧಿಭೋಗದಾರಿಕೆ ಪ್ರಮಾಣ ಪತ್ರ ವಿತರಣೆ ಮಾಡಿದ್ದಲ್ಲಿ ಸಂಬಂಧಿಸಿದವರ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದೆಂದು ಸಹ ತಿಳಿಸಿದೆ.

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

**ಇವರಿಗೆ,**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್‌ಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತ್‌ಗಳು. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
3. ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)

**ಪ್ರತಿಯನ್ನು ಮಾಹಿತಿಗಾಗಿ,**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ. ರವರ ಆಪ್ತ ಕಾರ್ಯದರ್ಶಿಗಳಿಗೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ರವರ ಆಪ್ತ ಸಹಾಯಕರಿಗೆ.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ. ರವರ ಆಪ್ತ ಸಹಾಯಕರಿಗೆ.
4. ಸಂಪಾದಕರು, ಕರ್ನಾಟಕ ವಿಕಾಸ/ವೆಬ್ ಸೈಟ್ ಪ್ರಕಟಣೆಗಾಗಿ.
5. ಕಛೇರಿ ಪತ್ರ.